## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ॥ ಬಿ.ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಶ್ರೀನಿವಾಸಪುರ ಇವರ ಅಮಾನತ್ತು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ – ಆದೇಶ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 103 ವಿಸೇಬಿ 2011 ದಿನಾಂಕ: 20-10-2011.
2. ಮಾನ್ಯ ಕೆ.ಎ.ಟಿ ಅರ್ಜಿ ಸಂಖ್ಯೆ: 7499/2011, ದಿನಾಂಕ:30.11.2011 ಮಧ್ಯಂತರ ಆದೇಶ.
3. ಡಾ॥ ಬಿ.ಕೃಷ್ಣಾರೆಡ್ಡಿ ರವರ ಮನವಿ ದಿನಾಂಕ: 25-11-2011.

----

<u>ಪ್ರಸ್ತಾವನೆ:</u>

ಮೂಲತ: ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಅಧಿಕಾರಿಯಾದ ಡಾ॥ ಬಿ.ಕೃಷ್ಣಾರೆಡ್ಡಿ ಇವರು ಶ್ರೀನಿವಾಸಪುರ ತಾಲ್ಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ, ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಕರ್ತವ್ಯಲೋಪ ಹಾಗೂ ಹಣ ದುರುಪಯೋಗ, ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯ ಕಾಮಗಾರಿಗಳನ್ನು, ಗ್ರಾಮ ಪಂಚಾಯಿತಿಗಳ ಸ್ವಚ್ಛತಾ ಕಾರ್ಯಕ್ರಮಗಳನ್ನು ಮತ್ತು ವಸತಿ ಯೋಜನೆಯ ಫಲಾನುಭವಿಗಳ ಪಟ್ಟಿಯನ್ನು ರಾಜೀವಗಾಂಧಿ ವಸತಿ ನಿಗಮಕ್ಕೆ ತುರ್ತಾಗಿ ಕಳುಹಿಸಬೇಕಾಗಿದ್ದರೂ ಸದರಿಯವರು ಕರ್ತವ್ಯಕ್ಕೆ ಗೈರು ಹಾಜರಾಗಿರುವುದರಿಂದ, ಯೋಜನೆಗಳು ನಿಗದಿತ ಅವಧಿಯಲ್ಲಿ ಅನುಷ್ಠಾನಗೊಳ್ಳದೇ ವಿಳಂಬವಾಗಿರುವ ಇತ್ಯಾದಿ ಕುರಿತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ರವರು ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿಯವರ ವಿರುದ್ಧದ ಕ್ರಿಮಿನಲ್ ಮೊಕದ್ದಮೆ/ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಆದೇಶದಲ್ಲಿ ಸದರಿಯವರನ್ನು ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಅಮಾನತ್ತಿನ ಆದೇಶದ ವಿರುದ್ಧ ಡಾ॥ ಬಿ.ಕೃಷ್ಣಾರೆಡ್ಡಿ ರವರು ಮಾನ್ಯ ಕೆ.ಎ.ಟಿ. ಯಲ್ಲಿ ಅರ್ಜಿ ಸಂಖ್ಯೆ:7499/2011ನ್ನು ಸಲ್ಲಿಸಿದ್ದು ಮಾನ್ಯ ನ್ಯಾಯ ಮಂಡಳಿಯು ಸದರಿ ಅರ್ಜಿಗೆ ಸಂಬಂಧಿಸಿದಂತೆ ದಿನಾಂಕ:30-11-2011ರ ಮಧ್ಯಂತರ ಆದೇಶದಲ್ಲಿ ಅಮಾನತ್ತಿನ ಆದೇಶಕ್ಕೆ 3 ತಿಂಗಳವರೆಗೆ ತಡೆಯಾಜ್ಞೆಯನ್ನು ನೀಡಿರುತ್ತದೆ ಹಾಗೂ ಸದರಿ ಅಧಿಕಾರಿಯವರು ಮೇಲೆ ಓದಲಾದ (3)ರ ಮನವಿಯಲ್ಲಿ ತಮ್ಮನ್ನು ಸೇವೆಗೆ ಪುನರ್ ಸ್ಥಾಪಿಸಬೇಕೆಂದು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಡಾ॥ ಬಿ.ಕೃಷ್ಣಾರೆಡ್ಡಿ ರವರು ಸೇವೆಗೆ ಪುನರ್ ಸ್ಥಾಪಿಸಲು ಸಲ್ಲಿಸಿದ ಕೋರಿಕೆಯನ್ನು ಹಾಗೂ ಮಾನ್ಯ ಕೆ.ಎ.ಟಿ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ, ಪ್ರಕರಣಕ್ಕೆ ಸಂಬಂಧಪಟ್ಟಂತೆ ಎಲ್ಲಾ ವಿವರಗಳನ್ನು ಪರಿಶೀಲಿಸಿ, ಸದರಿ ಅಧಿಕಾರಿಯವರ ವಿರುದ್ಧದ ಕ್ರಿಮಿನಲ್ ಮೊಕದ್ದಮೆ/ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ಸೇವೆಗೆ ಪುನರ್ ಸ್ಥಾಪಿಸಲು ತೀರ್ಮಾನಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 103 ವಿಸೇಬಿ 2011, ಬೆಂಗಳೂರು, ದಿನಾಂಕ:16-12-2011.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಡಾ॥ ಬಿ.ಕೃಷ್ಣಾರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಶ್ರೀನಿವಾಸಪುರ ಇವರ ವಿರುದ್ಧದ ಆರೋಪಗಳ ಕುರಿತಂತೆ ಇಲಾಖಾ ವಿಚಾರಣೆಯನ್ನು/ಕ್ರಿಮಿನಲ್ ಮೊಕದ್ದಮೆ ಬಾಕಿ ಇರಿಸಿ, ಅಮಾನತ್ತನ್ನು ತೆರವುಗೊಳಿಸಿ, ಅವರನ್ನು ಸೇವೆಗೆ ಪುನರ್ ಸ್ಥಾಪಿಸಿದೆ.

ಸದರಿಯವರು ಮುಂದಿನ ಸ್ಥಳನಿಯುಕ್ತಿಗಾಗಿ ಸರ್ಕಾರದಲ್ಲಿ ವರದಿ ಮಾಡಿಕೊಳ್ಳಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/12/11
(ಎಸ್.ಯು.ಶಿವಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ(ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
6. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ರವರ ಮುಖಾಂತರ).
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

Sbp/-